ಉಡುಪಿ ಜಿಲ್ಲೆಯಲ್ಲಿ ಪರಿಸರ ನಿಯಂತ್ರಣ ಮಂಡಳಿಯ ನಿಯಮಗಳ ಉಲ್ಲಂಘನೆ.

1520 (1838)

ಶ್ರೀ ಜಯಪ್ರಕಾಶ್ ಹೆಗಡೆ.ಕೆ.(ಬ್ರಹ್ಮಾವರ್): ಮಾನ್ಯ ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1) ಉಡುಪಿ ಜಿಲ್ಲೆಯಲ್ಲಿ ಎಷ್ಟು ಉದ್ದಿಮೆಗಳು ಮಾಲಿನ್ಯ ನಿಯಂತ್ರಣ ಮಂಡಳಿಯ ನಿಯಮಗಳನ್ನು ಉಲ್ಲಂಘನೆ ಮಾಡಿದೆ? ಅವುಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಕೆ.ಎಚ್.ರಂಗನಾಥ್ (ಅರಣ್ಯ, ಪರಿಸರ ಮತ್ತು ಜೀವಶಾಸ್ತ್ರ ಸಚಿವರು):

1) ಉಡುಪಿ ಜಿಲ್ಲೆಯಲ್ಲಿ ನೆಲ ಹಾಗೂ ವಾಯು ಕಾಯ್ದೆಗಳನ್ನು ಉಲ್ಲಂಘಿಸಿರುವ ಉದ್ದಿಮೆಗಳು - 15

ಅವುಗಳಲ್ಲಿ ಒಂದು ಬೃಹತ್ ಉದ್ದಿಮೆಯ ಮೇಲೆ ಜೆ ಎಂ ಎಫ್ ಸಿ ನ್ಯಾಯಾಲಯ ಉಡುಪಿಯಲ್ಲಿ ಕ್ರಿಮಿನಲ್ ಮೊಕದ್ದಮೆ ಹೂಡಲಾಗಿದೆ.

ಒಂದು ಮಧ್ಯಮ ವರ್ಗದ ಉದ್ದಿಮೆಯ ಮೇಲೆ ಕ್ರಿಮಿನಲ್ ಮೊಕದ್ದಮೆ ಹೂಡಲು ಕ್ರಮ ಕೈಗೊಳ್ಳಲಾಗುತ್ತಿದೆ.

13 ಸಣ್ಣ ಪ್ರಮಾಣದ ಉದ್ದಿಮೆಯ ಮೇಲೆ ನೋಟೀಸ್ ಅನ್ನು ಜಾರಿಗೊಳಿಸಲಾಗಿದೆ.

ಪೀನುಗಾರಿಕಾ ಇಲಾಖಾ ರಸ್ತೆಗಳು.

152(1840)

ಶ್ರೀ ಜಯಪ್ರಕಾಶ್ ಹೆಗಡೆ .ಕೆ.(ಬ್ರಹ್ಮಾವರ): ಮಾನ್ಯ ಪೀನುಗಾರಿಕೆ ಬಂದರು ಮತ್ತು ಪ್ರದೇಶಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪೀನುಗಾರಿಕಾ ಇಲಾಖಾ ರಸ್ತೆಗಳ ದುರಸ್ತಿಗಾಗಿ ಪ್ರಸಕ್ತ ಸಾಲಿನಲ್ಲಿ ಎಷ್ಟು ಹಣವನ್ನು ಪೂಪಲಿಡಲಾಗಿದೆ ಹಾಗೂ ಪ್ರತಿ ರಸ್ತೆಗಳನ್ನು ದುರಸ್ತಿ ಮಾಡಲು ಎಷ್ಟು ವೆಚ್ಚ ಮಾಡಲಾಗಿದೆ. (ವಿವರ ಒದಗಿಸುವುದು)

ಅ) ಇಲಾಖೆಯಿಂದ ಒಳನಾಡು ಮಿನುಗಾರಿಕಾ ರಸ್ತೆಗಳ ನಿರ್ಮಾಣ ಮತ್ತು ದುರಸ್ತಿಗಾಗಿ ಹಣವನ್ನು ಒದಗಿಸಲಾಗಿದೆಯೇ? ಹಾಗಿಲ್ಲದಿದ್ದಲ್ಲಿ ಕಾರಣಗಳೇನು?

ಇ) ಈ ಹಿಂದೆ ಒಳನಾಡು ಮಿನುಗಾರಿಕಾ ರಸ್ತೆಗಳಿಗೆ ಒದಗಿಸುತ್ತಿದ್ದ ಹಣವನ್ನು ಇತ್ತೀಚೆಗೆ ನಿಲ್ಲಿಸಿರುವುದು ನಿಜವೇ ಹಾಗಿದ್ದಲ್ಲಿ ಕಾರಣಗಳೇನು?

ಶ್ರೀ ಬಿ.ರಮಾನಾಥ್ ರೈ (ಮಿನುಗಾರಿಕೆ, ಬಂದರು ಮತ್ತು ಪ್ರದೇಶಾಭಿವೃದ್ಧಿ ಸಚಿವರು):

ಅ) ಪ್ರಸಕ್ತ ಸಾಲಿನಲ್ಲಿ ರೂ.5.00 ಲಕ್ಷಗಳ ಅನುದಾನವನ್ನು ಆಯವ್ಯಯದಲ್ಲಿ ಒದಗಿಸಲಾಗಿದೆ. ಇದರ ಜೊತೆಗೆ ರೂ:100 ಲಕ್ಷಗಳನ್ನು ಹೆಚ್ಚುವರಿ ಅನುದಾನ ಒದಗಿಸಲು ಒಪ್ಪಿದೆ. 2001-2002ನೇ ಸಾಲಿನಲ್ಲಿ ರಸ್ತೆ ದುರಸ್ತಿ ಮಾಡಲು ಇದುವರೆವಿಗೂ ಯಾವುದೇ ವೆಚ್ಚ ಮಾಡಿರುವುದಿಲ್ಲ.

ಆ) ಇಲ್ಲ. ಒಳನಾಡು ಮಿನುಗಾರಿಕಾ ರಸ್ತೆಗಳ ನಿರ್ಮಾಣ ಹಾಗೂ ದುರಸ್ತಿಗಾಗಿ ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಇ) ಇಲ್ಲ, ಉದ್ಭವಿಸುವುದಿಲ್ಲ.

ಕಬ್ಬು ಬೆಳೆಗಾರರಿಗೆ ಸಕ್ಕರೆ ಕಾರ್ಖಾನೆಯಿಂದ ಹಣ ಪಾವತಿ.

1522(1790)

ಶ್ರೀ ಕೌಜಲಗಿ ಮಹಾಂತೇಶ ಶಿವಾನಂದ(ಬೈಲಹೊಂಗಲ): ಮಾನ್ಯ ಪಶು ಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಸಕ್ಕರೆ ಕಾರ್ಖಾನೆಗಳು ಎಷ್ಟು ಕೋಟಿ ರೂ.ಗಳ ಕಬ್ಬಿನ ಬಿಲ್ಲನ್ನು ಸಂದಾಯ ಮಾಡಬೇಕಾಗಿದೆ; ಹಾಗೂ ತ್ವರಿತವಾಗಿ ಹಣ ಬಿಡುಗಡೆ ಮಾಡಲು ಯಾವ ಕ್ರಮವನ್ನು ಕೈಗೊಳ್ಳಲಾಗಿದೆ; ಎಷ್ಟು ದಿನಗಳಲ್ಲಿ ಕಬ್ಬಿನ ಬಿಲ್ಲನ್ನು ಸಂದಾಯ ಮಾಡಲಾಗುವುದು?

ಆ) ಬೆಳಗಾಂ ಜಿಲ್ಲೆಯಲ್ಲಿ ಎಷ್ಟು ಸಕ್ಕರೆ ಕಾರ್ಖಾನೆಗಳು ತಡಮಾಡಿ ಬಿಲ್ಲನ್ನು ಕೊಟ್ಟಿರುವುವು; ಕಬ್ಬಿನ ಬಿಲ್ಲಿನ ಬಾಕಿಯನ್ನು ರೈತರಿಗೆ ಕೊಡಬೇಕಾಗಿರುವ ಸಕ್ಕರೆ ಕಾರ್ಖಾನೆಗಳೆಷ್ಟು ಎಷ್ಟು ವರ್ಷಗಳಿಂದ ಯಾವ ಯಾವ ಕಾರ್ಖಾನೆಗಳು ರೈತರಿಗೆ ಹಣ ಸಂದಾಯ ಮಾಡಬೇಕಾಗಿರುವುದು; ಹಾಗೂ ಹಣದ ಮೊತ್ತವೆಷ್ಟು?